ಅಗ್ನಿಶಾಮಕ ಠಾಣೆಯನ್ನು ತೆರೆಯುವುದು

585 (637) ಶ್ರೀ ರಾಜಣ್ಣ ಎಂ. (ಶಿಡ್ಲಘಟ್ಟ) :– ಮಾನ್ಯ ಗೃಹ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಶಿಡ್ಲಘಟ್ಟ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬೇಸಿಗೆಯ ಸಮಯದಲ್ಲಿ ಬಡವರ ಗುಡಿಸಲುಗಳು ಹಾಗೂ ರೈತರ ರಾಗಿ ಇತರೆ ಬೆಳೆಗಳ ಬಣವೆಗಳು (ಮೆದೆಗಳು) ಆಕಸ್ಮಿಕ ಬೆಂಕಿಗೆ ಆಹುತಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಕಳೆದ ಮೂರು ವರ್ಷಗಳಲ್ಲಿ ಎಷ್ಟು ಪ್ರಕರಣಗಳು ದಾಖಲಾಗಿರುತ್ತವೆ ;

(ಇ) ಇಂತಹ ಪ್ರಕರಣಗಳನ್ನು ತಡೆಗಟ್ಟಲು ಶಿಡ್ಲಘಟ್ಟ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಹೊಸ ಅಗ್ನಿಶಾಮಕ ಠಾಣೆಯನ್ನು ತೆರೆಯುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಈ) ಹಾಗಿದ್ದಲ್ಲಿ, ಹೊಸ ಅಗ್ನಿಶಾಮಕ ಠಾಣೆಯನ್ನು ಸ್ಥಾಪಸಿಲು ಸರ್ಕಾರ ಜಮೀನನ್ನೇನಾದರೂ ಗುರುತಿಸಿದೆಯೇ ; ಯಾವ ಪ್ರದೇಶದಲ್ಲಿ ಜಮೀನನ್ನು ಗುರುತಿಸಲಾಗಿದೆ ;

(ಉ) ಹಾಗಿದ್ದಲ್ಲಿ, ಹೊಸ ಅಗ್ನಿಶಾಮಕ ಠಾಣೆಯನ್ನು ಎಂದು ತೆರೆಯ–ಲಾಗುವುದು ;

(ಊ) ಹೊಸ ಅಗ್ನಿಶಾಮಕ ಠಾಣೆಯನ್ನು ತೆರೆಯಲು ಸರ್ಕಾರಕ್ಕೆ ಇರುವ ತೊಂದರೆಗಳೇನು ?

ಶ್ರೀ ಕೆ. ಜೆ. ಜಾರ್ಜ್ (ಮಾನ್ಯ ಗೃಹ ಸಚಿವರು) :–

(ಅ) ಹೌದು.

(ಆ) ಕಳೆದ ಮೂರು ವರ್ಷಗಳಲ್ಲಿ

ಹುಲ್ಲಿನ ಬಣವೆ ಅಗ್ನಿ ಕರೆಗಳು	:	24
ಗುಡಿಸಲು ಅಗ್ನಿ ಕರೆಗಳು	:	05
ಒಟ್ಟು		29

ಪ್ರಕರಣಗಳು ದಾಖಲಾಗಿರುತ್ತವೆ.

(ಇ) ಸರ್ಕಾರದ ಆದೇಶ ಸಂಖ್ಯೆ: ಒಇ 235 ಕಅಸೇ 2005, ದಿನಾಂಕ: 05-08-2006 ರಲ್ಲಿ ಮಂಜೂರಾಗಿದೆ.

(ಈ) ಸರ್ವೆ ನಂ.206, ಹಿತ್ತಲಹಳ್ಳಿ ಗ್ರಾಮ, ಕಸಬಾ ಹೋಬಳಿ, ಶಿಡ್ಲಘಟ್ಟ ತಾಲ್ಲೂಕು ಇಲ್ಲಿ 01 ಎಕರೆ ಜಮೀನನ್ನು ಗುರುತಿಸಿ ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿಯವರು ಮಂಜೂರು ಮಾಡಿದ್ದು, ಜಮೀನು ಇಲಾಖೆಯ ವಶದಲ್ಲಿದೆ.

(ಉ) ತಾತ್ಕಾಲಿಕವಾಗಿ ಅಗ್ನಿಶಾಮಕ ಠಾಣೆಯನ್ನು ಶಿಡ್ಲಘಟ್ಟ, ಕೆ.ಎಸ್.ಆರ್.ಟಿ.ಸಿ. ಬಸ್ ನಿಲ್ದಾಣದ ಹಳೆಯ ಕಟ್ಟಡದಲ್ಲಿ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗಿದ್ದು, ಪ್ರಕ್ರಿಯೆ ಪ್ರಗತಿಯಲ್ಲಿದೆ.

(ಊ) ಅನುದಾನದ ಲಭ್ಯತೆಯನ್ನು ಆಧರಿಸಿ ಹಂತ ಹಂತವಾಗಿ ಪ್ರಾರಂಭಿಸಲಾಗುವುದು.

ಪೊಲೀಸ್ ಕ್ರೀಡಾ ಕೂಟಗಳಿಗೆ ಅನುದಾನ

578 (1054) ಶ್ರೀ ಪ್ರಮೋದ್ ಮಧ್ವರಾಜ್ (ಉಡುಪಿ) :- ಮಾನ್ಯ ಗೃಹ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:-

(ಅ) ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ವರ್ಷಂಪ್ರತಿ ನಡೆಯುವ ಜಿಲ್ಲಾ ಪೊಲೀಸ್ ಕ್ರೀಡಾಕೂಟಗಳಿಗೆ ಸರ್ಕಾರದಿಂದ ಅನುದಾನ ನೀಡಲಾಗುತ್ತಿದೆಯೇ ;

(ಆ) ಹಾಗಿದ್ದಲ್ಲಿ, 2010-11, 2011-12 ಮತ್ತು 2012-13ನೇ ಸಾಲುಗಳಲ್ಲಿ ಉಡುಪಿ ಜಿಲ್ಲಾ ಪೊಲೀಸ್ ಕ್ರೀಡಾಕೂಟಕ್ಕೆ ಎಷ್ಟು ಅನುದಾನ ಬಿಡುಗಡೆಗೊಳಿಸಲಾಗಿದೆ ಮತ್ತು ಬಿಡುಗಡೆಗೊಳಿಸಲಾದ ಅನುದಾನದಲ್ಲಿ ಯಾವ ಯಾವ ಉದ್ದೇಶಗಳಿಗೆ ಎಷ್ಟೆಷ್ಟು ಮೊತ್ತ ವಿನಿಯೋಗಿಸಲಾಗಿದೆ ; (ವರ್ಷವಾರು ವಿವರ ನೀಡುವುದು)

(ಇ) ಜಿಲ್ಲಾ, ರಾಜ್ಯ, ರಾಷ್ಟ್ರೀಯ ಹಾಗೂ ಅಂತರ್ ರಾಷ್ಟ್ರೀಯ ಕ್ರೀಡಾ ಕೂಟಗಳಲ್ಲಿ ಭಾಗವಹಿಸುವ ಪೊಲೀಸ್ ಸಿಬ್ಬಂದಿಗಳಿಗೆ ಸರ್ಕಾರದಿಂದ ಏನೇನು ವಿಶೇಷ ಸವಲತ್ತು, ಸೌಲಭ್ಯಗಳನ್ನು ನೀಡಲಾಗುತ್ತಿದೆ ; (ವಿವರ ನೀಡುವುದು)

(ಈ) ಕೂಟಗಳಲ್ಲಿ ಭಾಗವಹಿಸುವ ಪೊಲೀಸ್ ಸಿಬ್ಬಂದಿಗಳಿಗೆ ಕ್ರೀಡಾ ತರಬೇತಿ ನೀಡಲು ಹಾಗೂ ಕ್ರೀಡಾಪಟುಗಳು ಕ್ರೀಡಾ ತರಬೇತಿ ಪಡೆಯಲು ಸರ್ಕಾರವು ಏನು ಕ್ರಮ ಕೈಗೊಂಡಿದೆ.

(ಉ) 2010-11, 2011-12 ಮತ್ತು 2012-13ನೇ ಸಾಲುಗಳಲ್ಲಿ ವಿಶೇಷ ಭತ್ಯೆ ಮತ್ತು ವಿಶೇಷ ರಜೆ ಪಡೆದ ಜಿಲ್ಲಾ, ರಾಜ್ಯ, ರಾಷ್ಟ್ರೀಯ ಹಾಗೂ ಅಂತರ್‌ರಾಷ್ಟ್ರೀಯ